ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕೊರತೆ ಇರುವುದಿಲ್ಲ

ಆ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ

ಇ) ಹಂಚಿನಾಳ ಇದು Aided Medical Practitioners (A M P) ಕೇಂದ್ರವಾಗಿರುತ್ತದೆ ಸರ್ಕಾರಿ ಆದೇಶ ಸಂ ಆಕುಕ/402/ಪಿಐಎಂ/83, ದಿ 2–7–1987ರ ಪ್ರಕಾರ ಸದರಿ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ನಿವೃತ್ತಿ ಹೊಂದಿದ ತಕ್ಷಣ ಸದರಿ ಕೇಂದ್ರವು ರದ್ದಾಗಿರುತ್ತದೆ ಆದುದರಿಂದ ಆ ಸ್ಥಳದಲ್ಲಿ ಬೇರೆ ವೈದ್ಯರನ್ನು ನೇಮಕ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ

ಈ) ಸರ್ಕಾರವು ಈ ಬಗ್ಗೆ ಪರಿಶೀಲಿಸುತ್ತಿದೆ

609 (522) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿರುವ 100 ಹಾಸಿಗೆಯುಳ್ಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಮತ್ತು ಸ್ಟಾಫ್‌ನರ್ಸ್‌ಗಳ ಹುದ್ದೆಗಳಿಗೆ ನೇಮಕ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, 100 ಹಾಸಿಗೆ ಇರುವ ಸಾರ್ವಜನಿಕ ಆಸ್ಪತ್ರೆಗೆ ಅನುಗುಣವಾಗಿ ವೈದ್ಯಾಧಿಕಾರಿಗಳನ್ನು ಮತ್ತು ಸ್ಟಾಫ್‌ನರ್ಸ್‌ಗಳನ್ನು ನೇಮಕ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿರುವ 100 ಹಾಸಿಗೆಯುಳ್ಳ ಸಾರ್ವಜನಿಕ ಆಸ್ಪತ್ರೆಯಲ್ಲಿ ಹಾಲಿ 9 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು 7 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 2 ವೈದ್ಯರ ಹುದ್ದೆ ಖಾಲಿ ಇದೆ

ಅದರಂತೆ 6 ಶುಶ್ರೂಷಕ ಹುದ್ದೆ ಮಂಜೂರಾಗಿದ್ದು 6 ಶುಶ್ರೂಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಯಾವುದೇ ಹುದ್ದೆ ಖಾಲಿ ಇರುವುದಿಲ್ಲ

ಸದರಿ ಆಸ್ಪತ್ರೆಗೆ ಈ ಹೊಸದಾಗಿ 8 ವೈದ್ಯರು ಹಾಗೂ 6 ಶುಶ್ರೂಷಕರ ಹುದ್ದೆ ಹೆಚ್ಚುವರಿಯಾಗಿ ಮಂಜೂರಾಗಿದ್ದು, ಸಿಬ್ಬಂದಿಗಳ ನೇಮಕ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಾಗುವುದು

610 (523) ಶ್ರೀ ಮಾಮನಿ ವಿಶ್ವನಾಥ ಕರಿಬಸಪ್ಪ (ಪರಸಗಡ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಇನಾಮಹೊಂಗಲ ಮತ್ತು ಯಡಹಳ್ಳಿ ಗ್ರಾಮದಲ್ಲಿ ಗ್ರಾಮೀಣ ಪಶು ಚಿಕಿತ್ಸಾಲಯಗಳು ಹಾಗೂ ಅವುಗಳಿಗೆ ಕಟ್ಟಡಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಗ್ರಾಮಗಳಲ್ಲಿ ಗ್ರಾಮೀಣ ಪಶು ಚಿಕಿತ್ಸಾಲಯ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುವುದು ನಿಜವಲ್ಲವೇ?

ಇ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ ಹಾಗೂ ಯಾವಾಗ ಮಂಜೂರಾತಿ ನೀಡಲಾಗುವುದು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) – ಬಂದಿದೆ –

ಆ) ಹೌದು, ನಿಜ

ಇ) ರಾಷ್ಟ್ರೀಯ ಕೃಷಿ ಆಯೋಗ 1984ರ ಮೇರೆಗೆ ಪ್ರತಿ 5000 ಜಾನುವಾರು ಘಟಕಗಳಿಗೆ ಒಂದು ಪಶು ಚಿಕಿತ್ಸಾಲಯ ಇರಬೇಕು ಸವದತ್ತಿ ತಾಲ್ಲೂಕಿನಲ್ಲಿ 98,914 ಜಾನುವಾರು ಘಟಕಗಳಿದ್ದು, 20 ಪಶು ಚಿಕಿತ್ಸಾಲಯಗಳು ಇರಬೇಕಿತ್ತು ಆದರೆ ಈಗಾಗಲೇ 31 ಪಶುವೈದ್ಯ ಸಂಸ್ಥೆಗಳಿವೆ ಆದ್ದರಿಂದ ಹೊಸ ಪಶು ಚಿಕಿತ್ಸಾಲಯ ತೆರೆಯುವ ಪ್ರಶ್ನೆ ಉದ್ಭವಿಸುವುದಿಲ್ಲ

611 (524) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸಲ್ಲಿಸಿದ್ದ ಪ್ರಸ್ತಾವನೆಗೆ ಸರ್ಕಾರ ಕೈಗೊಂಡ ಕ್ರಮವೇನು?